Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
## ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.47(ಡಿ.ಜೆ ಹಳ್ಳಿ)
## ವಾರ್ಡ್ ಸಮಿತಿ ಸಭೆ, ದಿನಾಂಕ:17-07-2021 ರ ಸಭಾ ನಡವಳಿ

ಸಂಖ್ಯೆ:ಸ.ಕಾನಿ.ಅ (ಪು.ನ)/ಪಿಆರ್/19/21-22

ದಿನಾಂಕ: 17-07-2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 47-ಡಿ.ಜೆ.ಹಳ್ಳಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಡಿ.ಜೆ ಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1. | S. Vishwanatha | Nodal Officer ward No. 47- D J Halli & Asst. Executive Engineer, J.C Nagar Sub-division |
| 2. | Sri Yuvakumar | Asst Engineer (Ward NO.47) |
| 3. | Sri Rahul | JE BWSSB |
| 4. | Sri. Madhu | Junior Health Inspector |
| 5. | Sri Nagaraj | Tax Inspector |
| 6. | Sri Venkatesh | Horticulture Inspector |
| 7. | Sri Shivalinga murthy | J E Bescom |
| 8. | Sri Suresh | Ward Committee Member |
| 9. | Sri Madhiyarasan | Ward Committee Member |
| 10. | Sri Gopinath | Ward Committee Member |
| 11. | Sri Aravind.P | Ward Committee Member |
| 12. | Sri. Syed Ansar Pasha | Ward Committee Member |
| 13. | Sri. Mahendran | Ward Committee Member |
| 14. | Sri Azeem | Ward Committee Member |
| 15. | Sri Madhi | Ward Committee Member |

ಶ್ರೀ. ಎಸ್.ವಿಶ್ವನಾಥ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

1. ಡಿ.ಜೆ ಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿ ಸ್ವಚ್ಛತೆ ಕಾಪಾಡಲು ಹಾಗೂ ಕೋವಿಡ್-19 ವೈರಸ್ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಹಾಗೂ ಉರ್ದು ಶಾಲೆಯ ಬಳಿ ಸಾಮಿಲ್‌ನಿಂದ ಆಗುತ್ತಿರುವ ತ್ಯಾಜ್ಯ ರಸ್ತೆಗೆ ಹರಡದಂತೆ ಸೂಕ್ತ ಎಚ್ಚರಿಕೆಯನ್ನು ಸಂಬಂಧಪಟ್ಟವರಿಗೆ ನೀಡುವಂತೆ ಕಿರಿಯ ಆರೋಗ್ಯ ನಿರೀಕ್ಷಕರಿಗೆ ಸೂಚಿಸಲಾಯಿತು.
2. ಮೋದಿ ಗಾರ್ಡನ್ 6ನೇ ಕ್ರಾಸ್‌ನಲ್ಲಿ ಟ್ರಾನ್ಸ್‌ಫಾರ್ಮರನ್ನು ಸೂಕ್ತ ದೂರಕ್ಕೆ ಸ್ಥಳಾಂತರಿಸಲು ಕ್ರಮ ಕೈಗೊಳ್ಳುವಂತೆ ಈ ಹಿಂದಿನ ಸಭೆಗಳಲ್ಲಿ ಹಲವಾರು ಬಾರಿ ಬೆಸ್ಕಾಂ ರವರಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿತ್ತು. ಆದರೆ ಈವರೆವಿಗೆ ವಿದ್ಯುತ್ ಪರಿವರ್ತಕವನ್ನು ಬೇರೆಡೆಗೆ ಸ್ಥಳಾಂತರಿಸಲು ಕ್ರಮ ಕೈಗೊಂಡಿರುವುದಿಲ್ಲ ಎಂದು ವಾರ್ಡ್ ಸಮಿತಿ ಸದಸ್ಯರಾದ ಶ್ರೀ ಸುರೇಶ್‌ರವರು ಸಭೆಯಲ್ಲಿ ತಿಳಿಸಿರುತ್ತಾರೆ. ಆದ್ದರಿಂದ ಸದರಿ ವಿಷಯದ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ (ಉತ್ತರ-ಪೂರ್ವ ಕುಮಾರ ಪಾರ್ಕ್ ವಿಭಾಗ) ರವರು ಕೈಗೊಂಡಿರುವ ಕ್ರಮದ ಬಗ್ಗೆ ಮುಂದಿನ ಸಭೆಯಲ್ಲಿ ಪತ್ರ ಮುಖೇನ ತಿಳಿಸುವಂತೆ ಸೂಚಿಸಲಾಯಿತು.

3. ಮೋದಿ ಗಾರ್ಡನ್ 5ನೇ ಅಡ್ಡರಸ್ತೆ ಹಾಗೂ ದೊಡ್ಡಣ್ಣ ನಗರದ ಕಡೆಯಿಂದ ಹರಿದು ಬರುವ ಮಳೆ ನೀರು ಕಾಲುವೆಗಳಲ್ಲಿ ಹೂಳು ತುಂಬಿರುವ ಕಾರಣ ಸರಾಗವಾಗಿ ಹರಿಯುತ್ತಿರುವುದಿಲ್ಲ ಎಂದು ವಾರ್ಡ್ ಸಮಿತಿ ಸದಸ್ಯರಾದ ಶ್ರೀ ಪುರುಷೋತ್ತಮ್ ಹಾಗೂ ಇತರರು ತಿಳಿಸಿರುತ್ತಾರೆ. ಅದರಂತೆ ಸಭೆಯಲ್ಲಿ ಹಾಜರಿದ್ದ ಸಹಾಯಕ ಇಂಜಿನಿಯರ್‌ರೊಂದಿಗೆ ಚರ್ಚಿಸಲಾಗಿ ಸದರಿ ಕಾಮಗಾರಿ ನಿರ್ವಹಿಸಲು ಅನುದಾನದ ಅವಶ್ಯಕತೆ ಇದ್ದು, ಅನುದಾನ ಲಭ್ಯತೆಯ ಮೇರೆಗೆ ತ್ವರಿತ ಗತಿಯಲ್ಲಿ ಮೇಲಿನ ಕಾಮಗಾರಿಯನ್ನು ಕೈಗೊಳ್ಳುವುದಾಗಿ ತಿಳಿಸಿರುತ್ತಾರೆ.

4. ಮೋದಿ ಗಾರ್ಡನ್ 5ನೇ ಅಡ್ಡರಸ್ತೆ, ಮತ್ತಿತರ ಕಡೆಗಳಲ್ಲಿ ಕೆಲವರು ತಮ್ಮ ಮನೆಯ ಶೌಚಾಲಯಗಳಿಂದ ಮ್ಯಾನ್‌ಹೋಲ್‌ಗಳಿಗೆ ಸಂಪರ್ಕಿಸಬೇಕಾದ ಪೈಪ್‌ಲೈನ್ ಅನ್ನು ನೇರವಾಗಿ ರಸ್ತೆ ಬದಿಯ ಚರಂಡಿಗೆ ನೀಡಿರುವುದಾಗಿ ವಾರ್ಡ್ ಸಮಿತಿ ಸದಸ್ಯರು ದೂರಿರುತ್ತಾರೆ. ಅದರಂತೆ ದೂರವಾಣಿ ಮುಖಾಂತರ ಶ್ರೀ ದಸ್ತಗಿರ್ ಬಾಷಾ, ಸಹಾಯಕ ಇಂಜಿನಿಯರ್, ಬಿಡಬ್ಲ್ಯೂಎಸ್‌ಎಸ್‌ಬಿ ರವರನ್ನು ಸಂಪರ್ಕಿಸಿ ಪರಿಶೀಲನೆ ಮಾಡಿ ಸಂಬಂಧಪಟ್ಟವರಿಗೆ ನೋಟೀಸ್ ನೀಡಿ ದಂಡ ವಿಧಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.

ಸಹಿ
(ಎಸ್.ವಿಶ್ವನಾಥ)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47

**ಪ್ರತಿಯನ್ನು:**

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.

ಸಹಿ
(ಎಸ್.ವಿಶ್ವನಾಥ)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47